## 20. ಶಿಕ್ಷಣ ನೀತಿಯಲ್ಲಿ ಭಾಷಾ ಹೇರಿಕೆ ಇಲ್ಲ: ಕೇಂದ್ರ

ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಮೂಲಕ ಯಾವುದೇ ರಾಜ್ಯದ ಮೇಲೆ ಹಿಂದಿ ಸೇರಿದಂತೆ ಯಾವುದೇ ಭಾಷಾ ಹೇರಿಕೆ ಮಾಡುವ ಉದ್ದೇಶ ಹೊಂದಿಲ್ಲ. ಹೊಸ ರಾಷ್ಟ್ರೀಯ ಶಿಕ್ಷಣ ನೀತಿ 2020 ಮೂಲಕ ಹಿಂದಿ ಮತ್ತು ಸಂಸ್ಕೃತ ಭಾಷಾ ಹೇರಿಕೆಗೆ ಕೇಂದ್ರ ಸರ್ಕಾರ ಯತ್ನಿಸುತ್ತಿದೆ ಎಂಬ ಡಿಎಂಕೆ ಆರೋಪದ ಬೆನ್ನಲ್ಲೇ ಪೋಖ್ರಿಯಾಲ್ ಈ ಸ್ಪಷ್ಟನೆ ನೀಡಿದ್ದಾರೆ.

ತಮಿಳುನಾಡು ಮೂಲದ ಕೇಂದ್ರದ ಮಾಜಿ ಸಚಿವ ಪೊನ್ ರಾಧಾಕೃಷ್ಣನ್ ಅವರನ್ನು ಉದ್ದೇಶಿಸಿ ಟ್ವೀಟ್ ಮಾಡಿದ ಸಚಿವ ಪೋಖ್ರಿಯಾಲ್ ಅವರು ಹೊಸ ಶಿಕ್ಷಣ ನೀತಿ ಮೂಲಕ ಯಾವುದೇ ರಾಜ್ಯದ ಮೇಲೆ ಯಾವುದೇ ಭಾಷೆ ಹೇರಿಕೆ ಉದ್ದೇಶವನ್ನು ಕೇಂದ್ರ ಸರ್ಕಾರ ಹೊಂದಿಲ್ಲ ಎಂದು ಹೇಳಿದ್ದಾರೆ.

ತಮಿಳುನಾಡು ಪ್ರತಿಪಕ್ಷ ಡಿಎಂಕೆ ಮುಖ್ಯಸ್ಥ ಎಂ.ಕೆ. ಸ್ಟ್ಯಾಲಿನ್ ಸೇರಿದಂತೆ ಇನ್ನಿತರ ಪ್ರತಿಪಕ್ಷಗಳು ಕೇಂದ್ರದ ಹೊಸ ಶಿಕ್ಷಣ ನೀತಿಯನ್ನು ವಿರೋಧಿಸಿದ್ದವು. ಇದರ ವಿರುದ್ಧ ಸಮಾನ ಮನಸ್ಕ ಪಕ್ಷಗಳ ಸಹಕಾರದೊಂದಿಗೆ ಹೋರಾಟ ನಡೆಸುವುದಾಗಿ ಸ್ಟ್ಯಾಲಿನ್ ಅವರು ಗುಡುಗಿದ್ದರು.

**ಬಿಸಿಯೂಟದ ಜೊತೆಗೆ ವಿದ್ಯಾರ್ಥಿಗಳಿಗೆ ಬೆಳಗಿನ ಉಪಹಾರಕ್ಕೂ ಶಿಫಾರಸ್ಸು:** ಈಗಾಗಲೇ ಸರ್ಕಾರಿ ಹಾಗೂ ಅನುದಾನಿತ ಶಾಲಾ ಮಕ್ಕಳಿಗೆ ನೀಡಲಾಗುತ್ತಿರುವ ಮಧ್ಯಾಹ್ನದ ಬಿಸಿಯೂಟದ ಜೊತೆಗೆ ಬೆಳಿಗ್ಗೆ ಉಪಹಾರವನ್ನೂ ನೀಡಬೇಕು ಎಂದು ಹೊಸ ಶಿಕ್ಷಣ ನೀತಿಯಲ್ಲಿ ಶಿಫಾರಸ್ಸು ಮಾಡಲಾಗಿದೆ. ಅಪೌಷ್ಠಿಕತೆ ಹಾಗೂ ಅನಾರೋಗ್ಯದಿಂದ ಬಳಲುತ್ತಿರುವ ಮಕ್ಕಳಿಗೆ ಕಲಿಕೆ ಸಾಧ್ಯವಾಗುವುದಿಲ್ಲ. ಮಕ್ಕಳ ಪೌಷ್ಠಿಕಾಂಶ ಮತ್ತು ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಬಲ ಪಡಿಸಬೇಕು. ಇದಕ್ಕಾಗಿ ಆರೋಗ್ಯಯುಕ್ತ ಉಪಹಾರವನ್ನು ನೀಡಬೇಕು ಎಂದು ಹೊಸ ಶಿಕ್ಷಣ ನೀತಿಯಲ್ಲಿ ಹೇಳಲಾಗಿದೆ. ಪೌಷ್ಠಿಕಾಂಶ ಮತ್ತು ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಬಲಪಡಿಸಬೇಕು. ಇದಕ್ಕಾಗಿ ಆರೋಗ್ಯಯುಕ್ತ ಉಪಹಾರವನ್ನು ನೀಡಬೇಕು ಎಂದು ಹೊಸ ಶಿಕ್ಷಣ ನೀತಿಯಲ್ಲಿ ಹೇಳಲಾಗಿದೆ. ಪೌಷ್ಠಿಕಾಂಶಯುಕ್ತ ಆಹಾರ ಸೇವನೆ ಬಳಿಕದ ಕಲಿಕೆ ಹೆಚ್ಚು ಪರಿಣಾಮಕಾರಿ. ಇದಕ್ಕೆ ಮಧ್ಯಾಹ್ನದ ಬಿಸಿಯೂಟದ ಜೊತೆಗೆ ಬೆಳಗ್ಗೆ ಉಪಹಾರ ಕೂಡ ನೀಡಬೇಕು. ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ಮಾಡಬೇಕು. ಮಕ್ಕಳಿಗೆ ಆರೋಗ್ಯ ಕಾರ್ಡ್ ನೀಡಬೇಕು ಎಂದು ಶಿಫಾರಸ್ಸಿನಲ್ಲಿ ಹೇಳಲಾಗಿದೆ.

ಆಧಾರ:ಕನ್ನಡ ಪ್ರಭ, ದಿನಾಂಕ:03.08.2020